# ಜಿಲ್ಲಾ ಪಂಚಾಯತ್ ಉಡುಪಿ

ರಜತಾದ್ರಿ, ಮಣಿಪಾಲ, ಉಡುಪಿ ಜಿಲ್ಲೆ
ದೂರವಾಣಿ : 0820- 2574935
ಫ್ಯಾಕ್ಸ್ -0820 - 2574880
ಇ-ಮೇಲ್ : zpudupi@gmail.com

ದಿನಾಂಕ:21-2-2019.

ಸಂ:ಜಿಪಂಉ:ಅಭಿವೃದ್ಧಿ:ಸಿಆರ್ :2018-19

ಉಪನಿರ್ದೇಶಕರು,
ವಾರ್ತಾ ಮತ್ತು ಪ್ರಚಾರಾಧಿಕಾರಿ,
ಉಡುಪಿ.

ಮಾನ್ಯರೆ,

ವಿಷಯ: ಸ್ವಚ್ಛ ಭಾರತ ಮಿಷನ್ (ಗ್ರಾ) ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಸಮಾಲೋಚಕರ ಹುದ್ದೆಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುವ ಬಗ್ಗೆ ದಿನಪತ್ರಿಕೆಯಲ್ಲಿ ಪ್ರಕಟಿಸುವ ಬಗ್ಗೆ.

-0-

ಸ್ವಚ್ಛ ಭಾರತ ಮಿಷನ್ (ಗ್ರಾ) ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಜಿಲ್ಲಾ ಪಂಚಾಯತ್ ಉಡುಪಿ ಕಛೇರಿಗೆ ಸಮಾಲೋಚಕರ ಹುದ್ದೆಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಪ್ರಕಟಣೆಯನ್ನು ಇದರೊಂದಿಗೆ ಲಗತ್ತಿಸುತ್ತಾ ಸ್ಥಳೀಯವಾಗಿ ಹೆಚ್ಚು ಪ್ರಚಾರದಲ್ಲಿರುವ ಎರಡು ದಿನಪತ್ರಿಕೆಗಳಲ್ಲಿ ಪ್ರಕಟಿಸಬೇಕಾಗಿ ಕೋರಲಾಗಿದೆ.

ತಮ್ಮ ವಿಶ್ವಾಸಿ,

*ಮುಖ್ಯ ಕಾರ್ಯನಿರ್ವಹಣಾಧಿಕಾರಿ,*
*ಜಿಲ್ಲಾ ಪಂಚಾಯತ್, ಉಡುಪಿ.*

# ಜಿಲ್ಲಾ ಪಂಚಾಯತ್ ಉಡುಪಿ

ರಜತಾದ್ರಿ, ಮಣಿಪಾಲ, ಉಡುಪಿ ಜಿಲ್ಲೆ
ದೂರವಾಣಿ : 0820- 2574945
ಫ್ಯಾಕ್ಸ್ -0820 - 2574880
ಇ-ಮೇಲ್ : zpudupi@gmail.com

ಸಂ:ಜಿಪಂಉ:ಅಭಿ.ಸ್ವಭಾಮಿ:ಸಿ.ಆರ್ 41435:2018-19

ದಿನಾಂಕ: 21-2-2019.

## ಪ್ರಕಟಣೆ

ಉಡುಪಿ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಸ್ವಚ್ಛ ಭಾರತ ಮಿಷನ್ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ತಾತ್ಕಾಲಿಕ ನೆಲೆಯಲ್ಲಿ ಈ ಕೆಳಕಂಡ ಸಮಾಲೋಚಕರ ಹುದ್ದೆಗಳನ್ನು ಆಯ್ಕೆ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ. | ಹುದ್ದೆ | ಕನಿಷ್ಠ ವಿದ್ಯಾರ್ಹತೆ | ಮಾಸಿಕ ಸಮಾಲೋಚನಾ ಶುಲ್ಕ |
|---|---|---|---|
| 1. | ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) | M.S Communication/ M.A. in journalism from recognized university only (No distance education) | ರೂ.22,000/- |
| 2 | ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ (SLWM) | B.E. Environmental Engineering, B.E. Civil Engineering with Specialisation in environmental science from a regcognised university only (No distance education) | ರೂ.22,000/- |
| 3 | ಮೇಲ್ವಿಚಾರಣೆ, ಮೌಲ್ಯಮಾಪನ ಹಾಗೂ ಎಂಐಎಸ್ | M.C.A/M.A. Economics / Statistics, M.Sc. Computer Science / BE Computer Science from a recognized university only (No distance education) | ರೂ.22,000/- |

ಹುದ್ದೆಗೆ ಕನಿಷ್ಠ 3 ವರ್ಷಗಳ ಅನುಭವ ಹಾಗೂ ನೀರು ಮತ್ತು ನೈರ್ಮಲ್ಯ ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸಿದವರಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸುವವರ ವಯೋಮಿತಿ ಪ್ರಕಟಣೆ ದಿನಾಂಕಕ್ಕೆ 21 ವರ್ಷದಿಂದ 40 ವರ್ಷದ ಒಳಗಿನವರಾಗಿರತಕ್ಕದ್ದು. ಆಸಕ್ತರು ದಿನಾಂಕ: 28-2-2019 ರಂದು ಉಡುಪಿ ಜಿಲ್ಲಾ ಪಂಚಾಯತ್ ಕಛೇರಿ, ರಜತಾದ್ರಿ, ಮಣಿಪಾಲ ಇಲ್ಲಿಗೆ ಬೆಳಿಗ್ಗೆ 10.00 ಗಂಟೆಗೆ ಅಗತ್ಯ ದಾಖಲಾತಿಗಳೊಂದಿಗೆ ಫೋಟೋ ಸಹಿತ ಕಂಪ್ಯೂಟರ್ ಜ್ಞಾನ ಪರೀಕ್ಷೆ ಮತ್ತು ನೇರ ಸಂದರ್ಶನಕ್ಕೆ ಹಾಜರಾಗುವುದು. ಈಗಾಗಲೇ ಅರ್ಜಿ ಸಲ್ಲಿಸಿದ್ದು ನಿಗದಿಪಡಿಸಿದ ಅರ್ಹತೆ ಹೊಂದಿದವರು ಸಹ ಇದೇ ರೀತಿಯಾಗಿ ಸದ್ರಿ ದಿನದಂದು ಹಾಜರಾಗಬಹುದಾಗಿದೆ. ಪ್ರತ್ಯೇಕ ತಿಳುವಳಿಕೆ ನೀಡಲಾಗುವುದಿಲ್ಲ. ಈ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ / ತಡೆಹಿಡಿಯುವ /ಮಾರ್ಪಾಡು ಮಾಡುವ ಅಧಿಕಾರವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು ಹೊಂದಿರುತ್ತಾರೆ. ಹೆಚ್ಚಿನ ಮಾಹಿತಿಗಳು ಅಗತ್ಯವಿದ್ದಲ್ಲಿ 0820-2574945 ದೂರವಾಣಿಯನ್ನು ಸಂಪರ್ಕಿಸಬಹುದಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾ ಪಂಚಾಯತ್ ಉಡುಪಿ ವೆಬ್‌ಸೈಟ್ www.zpudupi.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ,
ಜಿಲ್ಲಾ ಪಂಚಾಯತ್, ಉಡುಪಿ.